# ಮೈಸೂರಿನ ಎಟಿಎಂಇ ಕಾಲೇಜಿಗೆ ರಾಷ್ಟ್ರೀಯ ಮಟ್ಟದ ಮಾನ್ಯತೆ



ಮೈಸೂರಿನ ಪತ್ರಕರ್ತರ ಭವನದಲ್ಲಿ ಬನ್ನೂರು ರಸ್ತೆಯ ಎಟಿಎಂಇ ಕಾಲೇಜಿನ ಪ್ರಿನ್ಸಿಪಾಲ್ ಡಾ.ಬಸವರಾಜು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಮೈಸೂರು, ಜ.20(ಬಿಎಲ್‌ಯು)– ಮೈಸೂರಿನ ಬನ್ನೂರು ರಸ್ತೆಯ ಎಟಿಎಂಇ ಇಂಜಿನಿಯರಿಂಗ್ ಕಾಲೇಜಿನ ಸಿವಿಲ್ ಮತ್ತು ಮ್ಯಾಕಾನಿಕಲ್ ವಿಭಾಗದ ಪ್ರಯೋಗಾಲಯಕ್ಕೆ ಎನ್‌ಎಬಿಎಲ್ ಮಂಡಳಿಯ ರಾಷ್ಟ್ರ ಮಟ್ಟದ ಮಾನ್ಯತೆ ದೊರೆತಿದೆ ಎಂದು ಕಾಲೇಜಿನ ಪ್ರಿನ್ಸಿಪಾಲ್ ಡಾ.ಬಸವರಾಜು ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರೀಯ ಪ್ರಯೋಗಾಲಯಗಳ ಪರೀಕ್ಷೆ ಮತ್ತು ಮಾಪನಾಂಕ ನಿರ್ಣಯ (ಎನ್‌ಎಬಿಎಲ್) ಮಂಡಳಿ ನಾಲ್ಕು ವರ್ಷದ ಅವಧಿಗೆ ಈ ಮಾನ್ಯತೆ ನೀಡಿದೆ ಎಂದರು. ಎನ್‌ಎಬಿಎಲ್ ಮಾನ್ಯತೆ ಪಡೆದಿರುವ ಪ್ರಯೋಗಾಲಯದ ಕೆಲವೇ ಇಂಜಿನಿಯರಿಂಗ್ ಕಾಲೇಜುಗಳ ಪೈಕಿ ನಮ್ಮ ಕಾಲೇಜು ಒಂದೆನಿಸಿದ್ದು, ಇದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಎನ್‌ಎಬಿಎಲ್ ಮಾನ್ಯತೆ ಪಡೆದ ಪ್ರಯೋಗಾಲಯದಲ್ಲಿ ಸರ್ಕಾರಿ ಹಾಗೂ ಖಾಸಗಿ ವಲಯಕ್ಕೆ ಬಳಸುವ ಮಣ್ಣು, ಜಲ್ಲಿ, ಇಟ್ಟಿಗೆ, ಕಬ್ಬಿಣ, ಸಿಮೆಂಟ್ ಸೇರಿದಂತೆ ಬಹುತೇಕ ಸಾಮಗ್ರಿಗಳ ಗುಣಮಟ್ಟವನ್ನು ಅಂತರಾಷ್ಟ್ರೀಯ ಮಾನದಂಡಕ್ಕೆ ಅನುಗುಣವಾಗಿ ನಿರ್ದಿಷ್ಟ ಪರೀಕ್ಷೆ ನಡೆಸಿ ನಿಖರ ವರದಿ ನೀಡಬಹುದಾಗಿದೆ. ಈ ಗುಣಮಟ್ಟದ ವರದಿ ಭಾರತದಲ್ಲಿ ಮಾತ್ರವಲ್ಲದೆ ಜಾಗತಿಕ ಮಟ್ಟದಲ್ಲೂ ಮಾನ್ಯತೆ ಪಡೆದಿರುತ್ತದೆ ಎಂದು ಬಸವರಾಜು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಕಾಲೇಜಿನ ಆಡಳಿತಾಧಿಕಾರಿ ಪ್ರೊ. ಸಚ್ಚಿದಾನಂದಮೂರ್ತಿ, ಪ್ರೊ.ಮನುವಿಜಯ್, ಪ್ರೊ.ಚಂದ್ರಶೇಖರ್ ಉಪಸ್ಥಿತರಿದ್ದರು.